ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರಿನ ತಾತ್ಕಾಲಿಕ ವ್ಯವಸ್ಥೆ ಮಾಡಲು ಉದ್ದೇಶಿಸಿದೆ.

ಕುಂದಾಪುರ ತಾಲ್ಲೂಕು ದಕ್ಷಿಣ ಹೆಮ್ಮಾಡಿ, ಮದುವನ ಹಾಲಾಡಿಗಳು ವಿದ್ಯುತ್ ಸಬ್ ಸ್ಟೇಷನ್

725 - ಶ್ರೀ ಐ.ಎಂ. ಜಯರಾಮ ಶೆಟ್ಟಿ (ಬೈಂದೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕುಂದಾಪುರ ತಾಲ್ಲೂಕು ದಕ್ಷಿಣ ಹೆಮ್ಮಾಡಿ, ಮದುವನ ಹಾಲಾಡಿಗಳಲ್ಲಿ ವಿದ್ಯುತ್ ಸಬ್-ಸ್ಟೇಷನ್ ಪ್ರಾರಂಭಿಸಲು ಸರ್ಕಾರ ನಿರ್ದರಿಸಿದೆಯೇ?

ಆ) ಹಾಗಿದ್ದಲ್ಲಿ ಯಾವಾಗಿನಿಂದ ಈ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಹೆಚ್.ಕೆ. ಪಾಟೀಲ್ (ಉಪ ಮುಖ್ಯಮಂತ್ರಿಗಳು) :

ಅ) ಕುಂದಾಪುರ ತಾಲ್ಲೂಕಿನ ಹಾಲಾಡಿಯಲ್ಲಿ ಒಂದು 110 ಕೆ.ವಿ. ಸಬ್-ಸ್ಟೇಷನ್ ಸ್ಥಾಪಿಸಲು ಉದ್ದೇಶಿಸಲಾಗಿದೆ. ಇದೇ ತಾಲ್ಲೂಕಿನ ದಕ್ಷಿಣ ಹೆಮ್ಮಾಡಿಯಲ್ಲಿ ಒಂದು 33 ಕೆ.ವಿ. ಸಬ್‌ಸ್ಟೇಷನ್ ಸ್ಥಾಪಿಸುವ ಬಗ್ಗೆ ಪರಶೀಲಿಸಲಾಗುತ್ತಿದೆ ಆದರೆ ಮದುವನದಲ್ಲಿ ವಿದ್ಯುತ್ ಸಬ್-ಸ್ಟೇಷನ್ ಸ್ಥಾಪನೆ ಬಗ್ಗೆ ಪ್ರಸ್ತಾವನೆಯು ಸದ್ಯಕ್ಕೆ ಇರುವುದಿಲ್ಲ

ಆ) ಹಾಲಾಡಿಯಲ್ಲಿ 110 ಕೆ.ವಿ. ಸಬ್-ಸ್ಟೇಷನ್ ನಿರ್ಮಾಣದ ಕಾರ್ಯವನ್ನು 1996-97ರ ಸಾಲಿನಲ್ಲಿ ಪ್ರಾರಂಭಿಸಲು ಉದ್ದೇಶಿಸಿದೆ.

ಕೊಲ್ಲೂರು ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ

719 - ಶ್ರೀ ಐ.ಎಂ. ಜಯರಾಮ ಶೆಟ್ಟಿ (ಬೈಂದೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರಸಿದ್ಧ ಯಾತ್ರಾಸ್ಥಳವಾದ ಕೊಲ್ಲೂರು ಮುಕಾಂಬಿಕೆಯ, ಕೊಲ್ಲೂರು ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ವ್ಯಾಪಕ ಕೊರತೆ ಇರುವ ವಿಷಯ ನಿಜವೇ?

ಆ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಂಡಿದೆ?

ಇ) ಹಾಗಿಲ್ಲದಿದ್ದಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆ?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪ.ರಾಜ್ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಕುಂದಾಪುರ ತಾಲ್ಲೂಕು "ಮರವಂತೆ"ಯನ್ನು ಪ್ರವಾಸಿ ತಾಣವಾಗಿ ಮಾಡುವುದು

729 - ಶ್ರೀ ಐ.ಎಂ. ಜಯರಾಮಶೆಟ್ಟ (ಬೈಂದೂರು) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಪ್ರಖ್ಯಾತ ಸಮುದ್ರ ದಂಡೆಯಿಂದ ಕುಂದಾಪುರ ತಾಲ್ಲೂಕು, ಮರವಂತೆಯನ್ನು ಪ್ರವಾಸಿತಾಣವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ ಇಲ್ಲಿಯವರೆಗೆ ಈ ಬಗ್ಗೆ ನಡೆದಿರುವ ಪ್ರಗತಿಯ ವಿವರ ಒದಗಿಸುವುದು?

ಇ) ಮರವಂತೆ ಯಾವ ವೈಶಿಷ್ಟ್ಯಗಳನ್ನು ಪ್ರವಾಸಿಗರಿಗೆ ಒದಗಿಸಲು ಸರ್ಕಾರ ನಿರ್ಧರಿಸಿದೆಯೇ ಮತ್ತು ಈ ಬಗ್ಗೆ ಚಿಂತನೆ ನಡೆದಿದೆಯೇ?

ಶ್ರೀ ಹೆಚ್.ಕೆ. ಪಾಟೀಲ್ (ಉಪಮುಖ್ಯ ಮಂತ್ರಿಗಳು) :